All India Radio: Bangalore
National Bulletin In Kannada
11.11.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

೧. ದೆಹಲಿ ಸ್ಫೋಟ ಹಿನ್ನೆಲೆ; ದೇಶಾದ್ಯಂತ ಕಟ್ಟೆಚ್ಚರ- ಉನ್ನತಮಟ್ಟದ ಸಭೆ ಕರೆದ ಗೃಹ ಸಚಿವ ಅಮಿತ್ ಶಾ

೨. ದೆಹಲಿ ಸ್ಫೋಟಕ್ಕೆ ವಿವಿಧ ದೇಶಗಳ ರಾಯಭಾರಿಗಳ ಖಂಡನೆ; ಗಾಯಾಳುಗಳ ಚೇತರಿಕೆಗೆ ಪ್ರಾರ್ಥನೆ

೩. ಬಿಹಾರದಲ್ಲಿ ೨ನೇ ಹಂತದ ವಿಧಾನಸಭಾ ಚುನಾವಣೆ; ಮತದಾನ ಆರಂಭ

೪. ವಲಸಿಗರು ಭಾರತದ ವೈವಿಧ್ಯತೆ ಮತ್ತು ಸಾಂಸ್ಕೃತಿಕ ಪರಂಪರೆಯ ನೇರ ಪ್ರತಿನಿಧಿಗಳು- ರಾಷ್ಟ್ರಪತಿ ದ್ರೌಪದಿ ಮುರ್ಮು

೫. ಇಂದಿನಿಂದ ಎರಡು ದಿನಗಳ ಭೂತಾನ್ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ

**<><><><>**

ದೆಹಲಿಯ ಕೆಂಪು ಕೋಟೆ ಬಳಿ ನಿನ್ನೆ ಸಂಜೆ ಕಾರಿನಲ್ಲಿ ಸಂಭವಿಸಿದ ಪ್ರಬಲ ಸ್ಫೋಟದಲ್ಲಿ ಎಂಟು ಜನರು ಸಾವನ್ನಪ್ಪಿ, ಹಲವಾರು ಜನ ಗಾಯಗೊಂಡಿದ್ದಾರೆ. ಸಂಜೆ ೭ ಗಂಟೆ ಸುಮಾರಿಗೆ ರಸ್ತೆಯಲ್ಲಿ ಸಂಚರಿಸುತ್ತಿದ್ದ ಹುಂಡೈ ಐ೨೦ ಕಾರು ಸ್ಫೋಟಗೊಂಡಿದೆ. ತನಿಖಾ ಸ್ಥಳಕ್ಕೆ ಭೇಟಿ ನೀಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಸಾರ್ವಜಕರಿಂದ ಮಾಹಿತಿ ಸಂಗ್ರಹಿಸಿದರು. ಎಲ್.ಎನ್.ಜೆ.ಪಿ ಆಸ್ಪತ್ರೆಯಲ್ಲಿ ಗಾಯಾಳುಗಳನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ಸ್ಫೋಟದಿಂದ ಮೂರರಿಂದ ನಾಲ್ಕು ಇತರ ವಾಹನಗಳಿಗೆ ಹಾನಿಯಾಗಿದೆ. ಪಾದಚಾರಿಗಳು ಹಾಗೂ ಆಟೋರಿಕ್ಷಾಗಳಲ್ಲಿ ಪ್ರಯಾಣಿಸುತ್ತಿದ್ದ ಜನ ಗಾಯಗೊಂಡಿದ್ದಾರೆ. ದೆಹಲಿ ಪೊಲೀಸ್, ಎನ್‌ಐಎ, ಎನ್‌ಎಸ್‌ಜಿ ಮತ್ತು ವಿಧಿವಿಜ್ಞಾನ ತಂಡಗಳು ತನಿಖೆಯನ್ನು ಪ್ರಾರಂಭಿಸಿವೆ ಮತ್ತು ಸ್ಫೋಟದ ನಿಖರವಾದ ವಿವರಗಳನ್ನು ಶೀಘ್ರದಲ್ಲೇ ಬಹಿರಂಗಪಡಿಸಲಾಗುವುದು ಎಂದು ಅಮಿತ್ ಶಾ ಹೇಳಿದರು.

**<><><><>**

ದೆಹಲಿ ಪೊಲೀಸರು ಕಾನೂನುಬಾಹಿರ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆ, ಸ್ಫೋಟಕಗಳ ಕಾಯ್ದೆ ಮತ್ತು ಭಾರತೀಯ ನ್ಯಾಯ ಸಂಹಿತೆಯ ವಿವಿಧ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಸ್ಫೋಟದ ನಂತರ ಗೃಹ ಸಚಿವ ಅಮಿತ್ ಶಾ ಅವರಿಂದ ಘಟನೆಯ ವಿವರಗಳನ್ನು ಪಡೆದುಕೊಂಡರು. ದೆಹಲಿ ಸ್ಫೋಟದ ಹಿನ್ನೆಲೆಯಲ್ಲಿ ಗೃಹ ಸಚಿವ ಅಮಿತ್ ಅವರು, ಇಂದು ಉನ್ನತಮಟ್ಟದ ಸಭೆ ನಡೆಸಿ, ಪರಿಸ್ಥಿತಿಯ ಪರಾಮರ್ಶೆ ನಡೆಸಲಿದ್ದಾರೆ. ಈ ಮಧ್ಯೆ ದೆಹಲಿಯ ಎಲ್.ಎನ್.ಜೆ.ಪಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಮಾತನಾಡಿ, ಆಸ್ಪತ್ರೆಗೆ ೧೫ ಮಂದಿಯನ್ನು

ಕರೆತರಲಾಗಿದ್ದು, ಈ ಪೈಕಿ ಮಾರ್ಗಮಧ್ಯೆ ೮ ಜನ ಮೃತಪಟ್ಟಿದ್ದಾರೆ. ಗಾಯಗೊಂಡವರಲ್ಲಿ ಮೂವರ ಪರಿಸ್ಥಿತಿ ಗಂಭೀರವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ದೆಹಲಿ ಸ್ಫೋಟದ ನಂತರ ಹಲವಾರು ದೇಶಗಳ ರಾಯಭಾರಿಗಳು ಸಂತಾಪ ಸೂಚಿಸಿದ್ದಾರೆ. ಮತ್ತು ಘಟನೆಯನ್ನು ಖಂಡಿಸಿದ್ದಾರೆ. ಜಪಾನಿನ ರಾಯಭಾರಿ ಓನೊ ಕೆಯಿಚಿ ಅವರು ಜೀವಹಾನಿಗೆ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ, ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ. ಭಾರತದಲ್ಲಿನ ಬ್ರಿಟಿಷ್ ರಾಯಭಾರಿ ಲಿಂಡಿ ಕ್ಯಾಮರೂನ್ ಅವರು ಸ್ಫೋಟದಿಂದ ಹಾನಿಗೊಳಗಾದವರ ದುಃಖದಲ್ಲಿ ನಾವು ಭಾಗಿಯಾಗಿದ್ದೇವೆ ಎಂದು ಹೇಳಿದ್ದಾರೆ. ಅರ್ಜೆಂಟೀನಾದ ರಾಯಭಾರಿ ಮರಿಯಾನೋ ಕಾಸಿನೊ ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ. ಭಾರತದಲ್ಲಿನ ಬಾಂಗ್ಲಾದೇಶದ ಹೈಕಮಿಷನರ್ ರಿಯಾಜ್ ಹಮೀದುಲ್ಲಾ ಅವರು ಈ ಸಮಯದಲ್ಲಿ ಬಾಂಗ್ಲಾದೇಶ ಭಾರತದೊಂದಿಗೆ ನಿಂತಿದೆ ಎಂದು ಹೇಳಿದರು. ಇರಾನ್ ರಾಯಭಾರ ಕಚೇರಿಯು ಸಹ ತನ್ನ ಸಂತಾಪವನ್ನು ವ್ಯಕ್ತಪಡಿಸಿದೆ. ಆಸ್ಟ್ರೇಲಿಯಾದ ಹೈಕಮಿಷನರ್ ಫಿಲಿಪ್ ಗ್ರೀನ್ ಅವರು ಸಹ ಘಟನೆಯನ್ನು ಖಂಡಿಸಿದ್ದಾರೆ. ಶ್ರೀಲಂಕಾದ ರಾಯಭಾರಿ ಮತ್ತು ಮೊರಾಕೊ ರಾಯಭಾರ ಕಚೇರಿಯು ಗಾಯಾಳುಗಳ ಚೇತರಿಕೆಗಾಗಿ ಪ್ರಾರ್ಥಿಸಿದೆ.

<><><>

ದೆಹಲಿ ಸ್ಫೋಟದ ಹಿನ್ನೆಲೆಯಲ್ಲಿ ರಾಷ್ಟ್ರವ್ಯಾಪಿ ವಿಮಾನ ನಿಲ್ದಾಣಗಳಲ್ಲಿ ಹೆಚ್ಚಿನ ಭದ್ರತಾ ಕ್ರಮಗಳನ್ನು ಅಳವಡಿಸಲಾಗಿದೆ. ಸುಗಮ ಚೆಕ್-ಇನ್ ಮತ್ತು ಬೋರ್ಡಿಂಗ್ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ಪ್ರಯಾಣಿಕರು ತಮ್ಮ ನಿಗದಿತ ನಿರ್ಗಮನಕ್ಕೆ ಕನಿಷ್ಠ ಮೂರು ಗಂಟೆಗಳ ಮೊದಲು ವಿಮಾನ ನಿಲ್ದಾಣಕ್ಕೆ ಬರಬೇಕೆಂದು ಆಕಾಶ್ ವಿಮಾನಯಾನ ಸಂಸ್ಥೆ ಹೇಳಿದೆ. ಹೆಚ್ಚುವರಿಯಾಗಿ, ವಿಮಾನ ನಿಲ್ದಾಣಕ್ಕೆ ಪ್ರವೇಶಿಸಲು ಸರ್ಕಾರದಿಂದ ಅನುಮೋದಿತ ಫೋಟೋ ಗುರುತಿನ ದಾಖಲೆಗಳನ್ನು ಕೊಂಡೊಯ್ಯಲು ಪ್ರಯಾಣಿಕರಿಗೆ ಸಲಹೆ ಮಾಡಿದೆ.

<><><>

ದೆಹಲಿಯಲ್ಲಿ ಬಾಂಬ್ ಸ್ಫೋಟದ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಮೈಸೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಕೇಂದ್ರಗಳು, ಬೆಂಗಳೂರು ವಿಮಾನ ನಿಲ್ದಾಣ, ಬಸ್ ನಿಲ್ದಾಣ ಹಾಗೂ ರೈಲು ನಿಲ್ದಾಣ ಸೇರಿದಂತೆ ಜನನಿಬಿಡ ಪ್ರದೇಶಗಳಲ್ಲಿ, ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದರು.

<><><>

ಬಿಹಾರದಲ್ಲಿ ಇಂದು ಎರಡನೇ ಮತ್ತು ಅಂತಿಮ ಹಂತದ ವಿಧಾನಸಭಾ ಚುನಾವಣೆ ನಡೆಯುತ್ತಿದೆ. ಮತದಾರರು ಮತಗಟ್ಟೆಗೆ ಆಗಮಿಸಿ ಮತದಾನ ಮಾಡುತ್ತಿದ್ದಾರೆ. ೨೦ ಜಿಲ್ಲೆಗಳಲ್ಲಿರುವ ೧೨೨ ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯುತ್ತಿದೆ. ೧೩೬ ಮಹಿಳೆಯರು ಸೇರಿ ೩ ಕೋಟಿ ೭೦ ಲಕ್ಷಕ್ಕೂ ಹೆಚ್ಚು ಮತದಾರರು ಒಂದು ಸಾವಿರದ ೩೦೨ ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ಭದ್ರತಾ ಕಾರಣಗಳಿಗಾಗಿ ಸಂಜೆ ೫ ಗಂಟೆಗೆ ಕೊನೆಗೊಳ್ಳುವ ೭ ಕ್ಷೇತ್ರಗಳನ್ನು ಹೊರತುಪಡಿಸಿ, ಮತದಾನ ಬೆಳಿಗ್ಗೆ ೭ ಗಂಟೆಗೆ ಪ್ರಾರಂಭವಾಗಿ ಸಂಜೆ ೬ ಗಂಟೆಗೆ ಮುಕ್ತಾಯಗೊಳ್ಳಲಿದೆ. ಭದ್ರತಾ ದೃಷ್ಟಿಯಿಂದ, ನೇಪಾಳಕ್ಕೆ ಹೊಂದಿಕೊಂಡಿರುವ ಗಡಿಗಳು ಮತ್ತು ಉತ್ತರ ಪ್ರದೇಶ, ಪಶ್ಚಿಮ ಬಂಗಾಳ ಹಾಗೂ ಜಾರ್ಖಂಡ್‌ನ ಅಂತರರಾಜ್ಯ ಗಡಿಗಳನ್ನು ಮುಚ್ಚಲಾಗಿದೆ. ಜೈನಗರ, ಮಧುಬನಿ ಮತ್ತು ನೇಪಾಳದ

ಜನಕ್‌ಪುರ ನಡುವಿನ ಮೈತ್ರಿ ಎಕ್ಸ್‌ಪ್ರೆಸ್ ರೈಲು ಸೇವೆಯ ಕಾರ್ಯಾಚರಣೆಯನ್ನು ಮತದಾನ ಪೂರ್ಣಗೊಳ್ಳುವವರೆಗೆ ಸ್ಥಗಿತಗೊಳಿಸಲಾಗಿದೆ. ಸಂಪೂರ್ಣ ಚುನಾವಣಾ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡಲು ಚುನಾವಣಾ ಆಯೋಗ ಪಾಟ್ನಾದ ಮುಖ್ಯ ಚುನಾವಣಾ ಅಧಿಕಾರಿ ಕಚೇರಿಯಲ್ಲಿ ಅತ್ಯಾಧುನಿಕ ನಿಯಂತ್ರಣ ಮತ್ತು ಕಮಾಂಡ್ ಕೇಂದ್ರವನ್ನು ಸ್ಥಾಪಿಸಿದೆ. ಎಲ್ಲಾ ೨೦ ಜಿಲ್ಲಾ ಕೇಂದ್ರಗಳಲ್ಲಿಯೂ ಇದೇ ರೀತಿಯ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದೆ. ಮಹಿಳಾ ಸಬಲೀಕರಣದ ಸಂದೇಶವನ್ನು ರವಾನಿಸಲು, ೫೯೫ ಮತಗಟ್ಟೆಗಳನ್ನು ಸಂಪೂರ್ಣವಾಗಿ ಮಹಿಳಾ ಚುನಾವಣಾ ಸಿಬ್ಬಂದಿ ಹಾಗೂ ೨೧ ಪಿಡಬ್ಲ್ಯೂಡಿ ಮತಗಟ್ಟೆಗಳನ್ನು ವಿಕಲಚೇತನ ಸಿಬ್ಬಂದಿ ನಿರ್ವಹಿಸುತ್ತಿದ್ದಾರೆ. ಹೆಚ್ಚುವರಿಯಾಗಿ, ೩೧೬ ಮಾದರಿ ಮತದಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮೊದಲ ಹಂತದ ಚುನಾವಣೆ ಈ ತಿಂಗಳ ೬ ರಂದು ನಡೆದಿದ್ದು, ಇದು ಸುಮಾರು ೬೫ ಪ್ರತಿಶತದಷ್ಟು ದಾಖಲೆಯ ಮತದಾನಕ್ಕೆ ಸಾಕ್ಷಿಯಾಗಿದೆ. ಮತ ಎಣಿಕೆಯನ್ನು ಈ ತಿಂಗಳ ೧೪ ರಂದು ಕೈಗೊಳ್ಳಲಾಗುವುದು.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ನಿನ್ನೆ ಅಂಗೋಲಾದಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು. ಸುಮಾರು ೮ ಸಾವಿರ ಬಲಿಷ್ಠ ಭಾರತೀಯ ವಲಸಿಗರು ಅಂಗೋಲಾದ ಆರ್ಥಿಕ ಪ್ರಗತಿಗೆ ಸಕಾರಾತ್ಮಕ ಕೊಡುಗೆ ನೀಡುತ್ತಿದ್ದಾರೆ ಎಂದು ಶ್ಲಾಘಿಸಿದರು. ಭಾರತದಲ್ಲಿನ ಸಮಗ್ರ ಸುಧಾರಣೆಗಳಲ್ಲಿ ಭಾರತೀಯ ವಲಸಿಗರು ಅವಿಭಾಜ್ಯ ಅಂಗವಾಗಿದ್ದಾರೆ. ಭಾರತ ಮತ್ತು ಅಂಗೋಲಾ ನಡುವಿನ ವ್ಯಾಪಾರ, ಹೂಡಿಕೆ ಮತ್ತು ಜನರಿಂದ ಜನರ ನಡುವೆ ಇರುವ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಅಪಾರ ಅವಕಾಶಗಳಿವೆ ಎಂದರು. ವಲಸಿಗರು ಭಾರತದ ವೈವಿಧ್ಯತೆ ಮತ್ತು ಸಾಂಸ್ಕೃತಿಕ ಪರಂಪರೆಯ ನೇರ ಪ್ರತಿನಿಧಿಗಳು. ಅವರು ಎರಡೂ ದೇಶಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ಕಾಲ ಭೂತಾನ್‌ಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯು ಉಭಯ ರಾಷ್ಟ್ರಗಳ ನಡುವಿನ ಉನ್ನತ ಮಟ್ಟದ ವಿಚಾರ - ವಿನಿಮಯಕ್ಕೆ ವೇದಿಕೆಯಾಗಲಿದೆ. ಭಾರತ ಮತ್ತು ಭೂತಾನ್ ನಡುವಿನ ವಿಶೇಷ ಸ್ನೇಹ ಮತ್ತು ಸಹಕಾರವನ್ನು ಮತ್ತಷ್ಟು ಗಾಢವಾಗಿಸುವ ಗುರಿಯನ್ನು ಇದು ಹೊಂದಿದೆ. ತಮ್ಮ ಭೇಟಿಯ ಸಮಯದಲ್ಲಿ, ನರೇಂದ್ರ ಮೋದಿ ಮತ್ತು ಭೂತಾನ್ ರಾಜ ಜಿಗ್ಮೆ ಖೇಸರ್ ನಮ್‌ಗೆಲ್ ವಾಂಗ್‌ಚುಕ್ ಅವರು ಇಪ್ಪತ್ತು ಸಾವಿರ ಮೆಗಾ ವ್ಯಾಟ್ ಪುನತ್ಸಾಂಗ್‌ಚು-II ಜಲವಿದ್ಯುತ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಈ ಯೋಜನೆಯನ್ನು ಭಾರತ ಮತ್ತು ಭೂತಾನ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಭೂತಾನ್‌ನ ನಾಲ್ಕನೇ ರಾಜ ಜಿಗ್ಮೆ ಸಿಂಗ್ಯೆ ವಾಂಗ್‌ಚುಕ್ ಅವರ ೭೦ ನೇ ಜನ್ಮ ದಿನಾಚರಣೆಯಲ್ಲಿ ಪ್ರಧಾನಿ ಭಾಗವಹಿಸಲಿದ್ದಾರೆ. ಪ್ರಧಾನಿ ಮೋದಿ ಅವರ ಭೇಟಿಯು ಥಿಂಪುವಿನಲ್ಲಿ ನಡೆಯುತ್ತಿರುವ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದ ಹಿನ್ನೆಲೆಯಲ್ಲಿ ಮಹತ್ವ ಪಡೆದುಕೊಂಡಿದೆ. ನರೇಂದ್ರ ಮೋದಿ ಅವರು ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಭಾಗವಹಿಸಲಿದ್ದಾರೆ. ಆಕಾಶವಾಣಿ ಸುದ್ದಿ ವಿಭಾಗದೊಂದಿಗೆ ಮಾತನಾಡಿದ ಭೂತಾನ್‌ನ ಭಾರತೀಯ ರಾಯಭಾರಿ ಸಂದೀಪ್ ಆರ್ಯ, ಈ ಭೇಟಿಯು ಎರಡೂ ದೇಶಗಳ ನಡುವಿನ ವಿಶೇಷ, ನಿಕಟ ಮತ್ತು ಆಳವಾದ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಗಾಢಗೊಳಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

<><><><>

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ - ಕೆ.ಎಸ್.ಆರ್.ಟಿ.ಸಿ, ಭಾರತ ಸರ್ಕಾರದ ವಸತಿ ಮತ್ತು ನಗರಾಭಿವೃದ್ಧಿ ಸಚಿವಾಲಯಜ, ರಾಷ್ಟ್ರೀಯ ಪ್ರಶಸ್ತಿಗೆ ಭಾಜನವಾಗಿದೆ. ಕೆ.ಎಸ್.ಆರ್.ಟಿ.ಸಿ, ಮೈಸೂರು ನಗರ ಸಾರಿಗೆಯ, ೨೦೦ ಬಸ್‌ಗಳಲ್ಲಿ ದೃಷ್ಟಿ ವಿಶೇಷಚೇತನರ ಅನುಕೂಲಕ್ಕಾಗಿ ಅಳವಡಿಸಿದ್ದ, ಧ್ವನಿ ಸ್ಪಂದನ - ಆನ್ ಬೋರ್ಡ್ ಬಸ್ ಐಡೆಂಟಿಫಿಕೇಶನ್ ಹಾಗೂ ನೇವಿಗೇಶನ್ ಸಿಸ್ಟಂ ಅನುಷ್ಠಾನಗೊಳಿಸಿದ್ದಕ್ಕೆ, ಈ ಪ್ರಶಸ್ತಿ ಸಂದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>

<><> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ<><>